ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು):-

883 (962) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಗಳ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಮೇಲ್ವಿಚಾರಕರ ಹುದ್ದೆಗಳೆಷ್ಟು ; ಹೊಸ ಹುದ್ದೆಗಳ ಸೃಷ್ಟಿ ಮತ್ತು ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) 2018-19, 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲಾಗಿದೆ ; ಎಷ್ಟು ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಮಾಹಿತಿ ಒದಗಿಸುವುದು)

(ಈ) ತೆಲಂಗಾಣ/ಮಹಾರಾಷ್ಟ್ರ ರಾಜ್ಯಗಳ ಗಡಿ ಭಾಗದ ಹಳ್ಳಿಗಳಲ್ಲಿರುವ ಅಂಗನವಾಡಿ ಕೇಂದ್ರಗಳ ಹಾಗೂ ಸಿಬ್ಬಂದಿಗಳ ಸ್ಥಿತಿಗತಿಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಲಭ್ಯವಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)